**RNU AIR DHARWAD**

**March 21, 2024**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

**ಮುಖ್ಯಾಂಶಗಳು**

- **ಮೊದಲ ಹಂತದ ಸಾರ್ವತ್ರಿಕ ಲೋಕಸಭಾ ಚುನಾವಣೆ ಅಧಿಸೂಚನೆ ಪ್ರಕಟ: 102 ಲೋಕಸಭಾ ಕ್ಷೇತ್ರಗಳಿಗೆ ಮತದಾನ.**

- **ಬೇಸಿಗೆ ಸಂದರ್ಭದಲ್ಲಿ ನೀರಿನ ದುಂದು ಬಳಕೆ ಬೇಡ–ಮುಖ್ಯಮಂತ್ರಿ ಸಿದ್ದರಾಮಯ್ಯ ಮನವಿ.**

- **ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ವಿಚಾರದಲ್ಲಿ ಯಾವುದೇ ಗೊಂದಲವಿಲ್ಲ– ಬಿ.ಎಸ್.ಯಡಿಯೂರಪ್ಪ**

- **ಲೋಕಸಭೆ ಚುನಾವಣೆ ಕರ್ತವ್ಯಕ್ಕೆ ನಿಯೋಜನೆಗೊಂಡಿರುವ ಉದ್ಯೋಗಿಗಳಿಗೆ ಅಂಚೆ ಮತದಾನದ ಸೌಲಭ್ಯ: ಚುನಾವಣಾ ಆಯೋಗ**

**ಈಗ ವಾರ್ತೆಗಳ ವಿವರ**
***********

**2024 ರ ಸಾರ್ವತ್ರಿಕ ಲೋಕಸಭಾ ಚುನಾವಣೆಯ ಮೊದಲ ಹಂತಕ್ಕೆ ನಿನ್ನೆ ಅಧಿಸೂಚನೆ ಪ್ರಕಟವಾಗಿದ್ದು, ಮೊದಲ ಹಂತದಲ್ಲಿ 17 ರಾಜ್ಯಗಳು ಮತ್ತು 4 ಕೇಂದ್ರಾಡಳಿತ ಪ್ರದೇಶಗಳಲ್ಲಿನ 102 ಲೋಕಸಭಾ ಕ್ಷೇತ್ರಗಳಿಗೆ ಮತದಾನ ನಡೆಯಲಿದೆ.**

**ಲೋಕಸಭಾ ಚುನಾವಣೆಯ ಮೊದಲ ಹಂತಕ್ಕೆ ನಿನ್ನೆಯಿಂದಲೇ ನಾಮಪತ್ರ ಸಲ್ಲಿಕೆ ಆರಂಭವಾಗಿದ್ದು, ಇದೇ 27 ನಾಮಪತ್ರ ಸಲ್ಲಿಕೆಗೆ ಕೊನೆಯ ದಿನ. 28 ರಂದು ನಾಮಪತ್ರ ಪರಿಶೀಲನೆ ನಡೆಯಲಿದೆ. ನಾಮಪತ್ರ ಹಿಂಪಡೆಯಲು ಇದೇ 30 ಕೊನೆಯ ದಿನವಾಗಿದ್ದು, ಏಪ್ರಿಲ್ 19 ರಂದು ಮತದಾನ ಜರುಗಲಿದೆ.**

**ಮೊದಲ ಹಂತದಲ್ಲಿ ತಮಿಳುನಾಡಿನ 39, ರಾಜಸ್ಥಾನದ 12, ಉತ್ತರ ಪ್ರದೇಶದ 8, ಮಧ್ಯ ಪ್ರದೇಶದ 6, ಉತ್ತರಾಖಂಡ, ಅಸ್ಸಾಂ ಮತ್ತು ಮಹಾರಾಷ್ಟ್ರದ ತಲಾ 5, ಬಿಹಾರದ 4, ಪಶ್ಚಿಮ ಬಂಗಾಳದ 3, ಅರುಣಾಚಲ ಪ್ರದೇಶ, ಮಣಿಪುರ, ಮೇಘಾಲಯದ ತಲಾ 2 ಹಾಗೂ ಛತ್ತೀಸ್‌ಗಢ, ಮಿಜೋರಾಂ, ನಾಗಾಲ್ಯಾಂಡ್, ಸಿಕ್ಕಿಂ,**

ತ್ರಿಪುರಾ, ಅಂಡಮಾನ್ ಮತ್ತು ನಿಕೋಬಾರ್, ಜಮ್ಮು–ಕಾಶ್ಮೀರ, ಲಕ್ಷದ್ವೀಪ ಮತ್ತು ಪುದುಚೇರಿಯ ತಲಾ ಒಂದು ಸ್ಥಾನಗಳಿಗೆ ಮತದಾನ ನಡೆಯಲಿದೆ.

*******

ಮಳೆ ಕೊರತೆಯಿಂದಾಗಿ ರಾಜ್ಯದಲ್ಲಿ ನೀರಿನ ಕೊರತೆ ಉಂಟಾಗಿದ್ದು, ನೀರಿನ ದುಂದು ಬಳಕೆ ಬೇಡ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮನವಿ ಮಾಡಿದ್ದಾರೆ.

ಸಾಮಾಜಿಕ ಜಾಲತಾಣ ಎಕ್ಸ್ ಮೂಲಕ ಈ ಮನವಿ ಮಾಡಿರುವ ಅವರು, ಮಳೆ ಕೊರತೆಯಿಂದಾಗಿ ರಾಜ್ಯದಲ್ಲಿ ಬಹುತೇಕ ಬೋರ್‌ವೆಲ್‌ಗಳು ಬತ್ತಿಹೋಗಿವೆ, ಬಿಸಿಲಿನ ತಾಪಕ್ಕೆ ನದಿಗಳ ಒಡಲು ಬರಿದಾಗುತ್ತಿದೆ, ಇಂತಹ ಸಂದರ್ಭದಲ್ಲಿ ನೀರಿನ ದುಂದು ಬಳಕೆಗೆ ಕಡಿವಾಣ ಹಾಕಿ ಅಗತ್ಯಕ್ಕೆ ಬೇಕಾದ ಷ್ಟೇ ನೀರನ್ನು ಬಳಸುವ ಮೂಲಕ ಇತರರಿಗೆ ಮಾದರಿಯಾಗೋಣ ಎಂದಿದ್ದಾರೆ.

ಈ ವರ್ಷ ನೀರಿನ ಆಕರಗಳೆಲ್ಲವು ಬತ್ತಿ ಹೋಗಿವೆ. ಬಿರು ಬಿಸಿಲಿಗೆ ಬಾಯಾರಿದ ಪ್ರಾಣಿ ಪಕ್ಷಿಗಳು ಕುಡಿಯುವ ನೀರಿಗಾಗಿ ಪರಿತಪಿಸುವಂತಾಗಿದೆ. ಈ ಮೂಕವೇದನೆಯನ್ನು ಅರ್ಥ ಮಾಡಿಕೊಂಡ ಮಲೆನಾಡಿನ ರೈತರೊಬ್ಬರು ತಮ್ಮ ಸ್ವಂತ ಜಮೀನಿನಲ್ಲಿರುವ ಬೋರ್‌ವೆಲ್‌ನಿಂದ ನೀರೆತ್ತಿ ಬತ್ತಿದ ನದಿಗೆ ಹರಿಸುವ ಮೂಲಕ ಸಹಸ್ರಾರು ವನ್ಯಜೀವಿಗಳಿಗೆ ನೀರುಣಿಸುವ ಕೆಲಸ ಮಾಡಿರುವುದು ಮಾದರಿ ನಡೆ ಎಂದು ಮುಖ್ಯಮಂತ್ರಿ ಶ್ಲಾಘಿಸಿದ್ದಾರೆ.

*******

ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ವಿಚಾರದಲ್ಲಿ ಯಾವುದೇ ಗೊಂದಲವಿಲ್ಲ ಎಂದು ಬಿಜೆಪಿ ಸಂಸದೀಯ ಮಂಡಳಿ ಸದಸ್ಯ ಹಾಗೂ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಹೇಳಿದ್ದಾರೆ.

ದೆಹಲಿಯಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಏನೇ ಸಮಸ್ಯೆ ಇದ್ದರೂ ಪಕ್ಷದ ವರಿಷ್ಠರು ಚರ್ಚಿಸಿ, ಬಗೆಹರಿಸಲಿದ್ದಾರೆ. ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳು ಜೊತೆಯಾಗಿ ಎಲ್ಲ 28 ಕ್ಷೇತ್ರಗಳಲ್ಲಿ ಸ್ಪರ್ಧಿಸಲಿವೆ. ಎಲ್ಲ ಕ್ಷೇತ್ರಗಳಲ್ಲಿ ತಮ್ಮ ಅಭ್ಯರ್ಥಿಗಳು ಗೆಲುವು ಸಾಧಿಸುವ ವಿಶ್ವಾಸವಿದೆ ಎಂದರು.

ಬಿಜೆಪಿ ಅಭ್ಯರ್ಥಿಗಳ ಆಯ್ಕೆ ವಿಚಾರದಲ್ಲಿ ಯಾವುದೇ ಸಮಸ್ಯೆ ಇಲ್ಲ. ಕೆಲ ಹಿರಿಯ ನಿಷ್ಠಾವಂತ ನಾಯಕರು ಟಿಕೆಟ್ ಸಿಗದ ಕಾರಣಕ್ಕೆ ಸ್ವಲ್ಪ ಬೇಸರಗೊಂಡು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಎಲ್ಲರೊಂದಿಗೆ ಮಾತನಾಡಿ ಅವರ ಮನವೊಲಿಸಲಾಗುತ್ತಿದ್ದು, ಶೀಘ್ರವೇ ಪರಿಸ್ಥಿತಿ ತಿಳಿಯಾಗಲಿದೆ ಎಂದು ಬಿ.ಎಸ್.ಯಡಿಯೂರಪ್ಪ ತಿಳಿಸಿದರು.

*******

ಮುಂಬರುವ ಲೋಕಸಭಾ ಚುನಾವಣೆ ದಿನಾಂಕ ಘೋಷಣೆಯಾಗಿದ್ದು, ಮೊದಲ ಬಾರಿ ಮತ ಚಲಾಯಿಸುತ್ತಿರುವವರು, ವಿಳಾಸ ಬದಲಾಯಿಸಲು ಬಯಸುವವರು, ವೋಟರ್ ಐಡಿಯಲ್ಲಿನ ಮಾಹಿತಿ ತಿದ್ದುಪಡಿ ಮಾಡಿಸಬೇಕೆನ್ನುವವರಿಗೆ ಇದೇ ಮಾರ್ಚ್ 25 ವರೆಗೆ ಅವಕಾಶವಿದೆ.

ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಮಾಹಿತಿ ನೀಡಿರುವ ಕೇಂದ್ರ ಸಚಿವ ಪ್ರಲ್ಹಾದ ಜೋಶಿ voters.eci.gov.in ಜಾಲತಾಣಕ್ಕೆ ಭೇಟಿ ಕೊಟ್ಟು, ಮತದಾರರ ಪಟ್ಟಿಯಲ್ಲಿ ನಿಮ್ಮ ಹೆಸರು ಬರುವಂತೆ ಕ್ರಮ ಕೈಗೊಳ್ಳಿ. ಹೆಚ್ಚಿನ ಮಾಹಿತಿಗೆ 1950 ಸಹಾಯವಾಣಿಗೆ ಕರೆ ಮಾಡಿ ಎಂದು ಸಂದೇಶದಲ್ಲಿ ಮಾಹಿತಿ ನೀಡಿದ್ದಾರೆ.

*******

ಶಿವಮೊಗ್ಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಗೀತಾ ಶಿವರಾಜ್ ಕುಮಾರ್ ಅವರ ಪರ ಅವರ ಪತಿ ಖ್ಯಾತ ನಟ ಶಿವರಾಜ್ ಕುಮಾರ್ ಮತಯಾಚನೆ ಮಾಡಿದರು.

ಪ್ರಮುಖ ಹಳ್ಳಿಗಳಲ್ಲಿ ಪ್ರಚಾರ ನಡೆಸಿದ ಅವರು, ಬೈಕ್ ರಾಲಿಯಲ್ಲಿ ಪಾಲ್ಗೊಂಡಿದ್ದ ಕಾರ್ಯಕರ್ತರೊಂದಿಗೆ ಮನೆ ಮನೆಗೂ ತೆರಳಿ ಗೀತಾ ಅವರನ್ನು ಬೆಂಬಲಿಸುವಂತೆ ಮನವಿ ಮಾಡಿದರು.

ಈ ವೇಳೆ ಸಚಿವ ಮಧು ಬಂಗಾರಪ್ಪ, ಶಾಸಕರಾದ ಬಿ.ಕೆ.ಸಂಗಮೇಶ್, ಗೋಪಾಲಕೃ ಣ್ಣ ಬೇಳೂರು ಮತ್ತಿತರರು ಇದ್ದರು.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

ಲೋಕಸಭೆ ಹಾಗೂ 4 ರಾಜ್ಯಗಳಲ್ಲಿನ ವಿಧಾನಸಭೆ ಚುನಾವಣೆಗಳ ಹಿನ್ನೆಲೆ, ಅಗತ್ಯ ಕರ್ತವ್ಯಗಳಿಗೆ ನಿಯೋಜನೆಗೊಂಡಿರುವ ಉದ್ಯೋಗಿಗಳಿಗೆ ಅಂಚೆ ಮೂಲಕ ಮತದಾನದ ಸೌಲಭ್ಯವನ್ನು ಚುನಾವಣಾ ಆಯೋಗ ಪ್ರಕಟಿಸಿದೆ.

ಮತದಾನದ ದಿನ ನಿಯೋಜನೆಗೊಂಡಿರುವ ಉದ್ಯೋಗಿಗಳ ಪಟ್ಟಿಯಲ್ಲಿ ಮೆಟ್ರೋ, ರೈಲ್ವೆ, ಬಿಎಸ್‌ಎನ್‌ಎಲ್, ವಿದ್ಯುತ್ ಮತ್ತು ಆರೋಗ್ಯ ಇಲಾಖೆಗಳು, ಅಗ್ನಿಶಾಮಕ ದಳ, ಅಂಚೆ ಸೇವೆ, ವೈಮಾನಿಕ, ವಿಪತ್ತು ನಿರ್ವಹಣೆ, ದೂರದರ್ಶನ ಮತ್ತು ಆಕಾಶವಾಣಿ ಹಾಗೂ ಆಯೋಗದಿಂದ ಅಧಿಕಾರ ಪಡೆದ ಮಾಧ್ಯಮದವರು ಸೇರಿದ್ದಾರೆ.

1951ರ ಪ್ರಾತಿನಿಧ್ಯ ಕಾಯಿದೆಯ ನಿಬಂಧನೆಗಳ ಪ್ರಕಾರ ಈ ವಿ ´ಯ ಪರಿಗಣಿಸಿ, ಅಗತ್ಯ ಸೇವೆಗಳಲ್ಲಿ ಉದ್ಯೋಗದಲ್ಲಿರುವವರಿಗೆ ಕರ್ತವ್ಯದ ಮೇಲೆ ಅಂಚೆ ಮತಪತ್ರದ ಮೂಲಕ ಮತ ಚಲಾಯಿಸಲು ಸೂಚಿಸಲಾಗಿದೆ ಎಂದು ಆಯೋಗ ಹೇಳಿದೆ.

*******

ಲೋಕಸಭೆ ಚುನಾವಣೆ ಅಂಗವಾಗಿ ಬೆಂಗಳೂರಿನ ವಾರ್ತಾ ಇಲಾಖೆಯ ಕೇಂದ್ರ ಕಚೇರಿಯಲ್ಲಿ ಮಾಧ್ಯಮ ಪ್ರತಿನಿಧಿಗಳಿಗೆ 'ಚುನಾವಣಾ ಸಮಯದಲ್ಲಿ ಮಾಧ್ಯಮ' ಎಂಬ ಕಾರ್ಯಾಗಾರ ಆಯೋಜಿಸಲಾಗಿತ್ತು.

ರಾಜ್ಯ ಮುಖ್ಯ ಚುನಾವಣಾಧಿಕಾರಿ ಮನೋಜ್ ಕುಮಾರ್ ಮೀನಾ ಕಾರ್ಯಾಗಾರ ಉದ್ಘಾಟಿಸಿದರು. ಕಾರ್ಯಕ್ರಮದಲ್ಲಿ ಅಪರ ಮುಖ್ಯ ಚುನಾವಣಾಧಿಕಾರಿ ಆರ್ ವೆಂಕಟೇಶ್‌ಕುಮಾರ್, ವಾರ್ತಾ ಇಲಾಖೆ ಆಯುಕ್ತ ಹೇಮಂತ್ ನಿಂಬಾಳ್ಕರ್ ಸೇರಿದಂತೆ ಚುನಾವಣಾಧಿಕಾರಿಗಳು ಹಾಗೂ ಮಾಧ್ಯಮ ಪ್ರತಿನಿಧಿಗಳು ಪಾಲ್ಗೊಂಡಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಮುಖ್ಯ ಚುನಾವಣಾಧಿಕಾರಿ ಮನೋಜ್ ಕುಮಾರ್ ಮೀನಾ, ಚುನಾವಣಾ ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ವಸ್ತು ನಿ ್ಠ ಸುದ್ದಿಗಳನ್ನು ಬಿತ್ತರಿಸುವ ಕೆಲಸ ಮಾಡಬೇಕು, ರಾಜಕೀಯ ಜಾಹಿರಾತು ಹಾಗೂ ಪಕ್ಷಗಳ ಜಾಹಿರಾತುಗಳ ಪ್ರಚಾರದ ಕುರಿತು ನಿಗಾ ವಹಿಸಲಾಗುವುದು ಎಂದು ಹೇಳಿದರು.

*******

ರಾಮನಗರ ಜಿಲ್ಲೆಯಾದ್ಯಂತ ಕಟ್ಟುನಿಟ್ಟಾಗಿ ಮಾದರಿ ನೀತಿ ಸಂಹಿತೆ ಜಾರಿಗೊಳಿಸಿದ್ದು, ಮಾರ್ಚ 18 ರವರೆಗೆ, ಜಿಲ್ಲೆಯ ವಿವಿಧ ಚೆಕ್‌ಪೋಸ್ಟ್‌ಗಳಲ್ಲಿ ತಪಾಸಣೆ ವೇಳೆ ಒಟ್ಟು 29380 ಲೀಟರ ಮದ್ಯ ವಶಕ್ಕೆ ಪಡೆಯಲಾಗಿದೆ.

ಅಬಕಾರಿ ಇಲಾಖೆ ಕಾರ್ಯಾಚರಣೆ ವೇಳೆ 1,18,01,944 ರೂಪಾಯಿ ಮೌಲ್ಯದ 29376 ಲೀಟರ ಮದ್ಯ ಹಾಗೂ ಪೋಲಿಸ್ ಇಲಾಖೆ ಕಾರ್ಯಾಚರಣೆಯಲ್ಲಿ 2,664 ರೂ ಮೌಲ್ಯದ 4.068 ಲೀ ಮದ್ಯ ವಶಕ್ಕೆ ಪಡೆದು ಪ್ರಕರಣ ದಾಖಲಿಸಲಾಗಿದೆ.

*******

ಚಾಮರಾಜನಗರ ಲೋಕಸಭಾ ಕ್ಷೇತ್ರದ ಚುನಾವಣೆಗೆ ವೇಳಾ ಪಟ್ಟಿ ಪ್ರಕಟಿಸಲಾಗಿದ್ದು, ಏಪ್ರಿಲ್ 26 ರಂದು ಮತದಾನ ನಡೆಯಲಿದೆ. ಚುನಾವಣಾ ಪ್ರಕ್ರಿಯೆಗೆ ಜಿಲ್ಲಾಡಳಿತದಿಂದ ಎಲ್ಲಾ ಸಿದ್ಧತೆ ಕೈಗೊಳ್ಳಲಾಗಿದೆ.

ಚಾಮರಾಜನಗರ ಲೋಕಸಭಾ ಕ್ಷೇತ್ರದ ಚುನಾವಣೆಗೆ ಮಾರ್ಚ್ 28 ರಂದು ಅಧಿಸೂಚನೆ ಹೊರಡಿಸಲಾಗುತ್ತದೆ. ನಾಮಪತ್ರ ಸಲ್ಲಿಸಲು ಏಪ್ರಿಲ್ 4 ಕೊನೆಯ ದಿನ.

5 ರಂದು ನಾಮಪತ್ರಗಳ ಪರಿಶೀಲನೆ, 8 ರಂದು ಉಮೇದುವಾರಿಕೆ ಹಿಂತೆಗೆದುಕೊಳ್ಳಲು ಕಡೆಯ ದಿನವಾಗಿದೆ. ಏಪ್ರಿಲ್ 26 ರಂದು ಮತದಾನ ನಡೆಯಲಿದ್ದು, ಜೂನ್ 4 ರಂದು ಮತ ಎಣಿಕೆ ಕಾರ್ಯ ನಡೆಯಲಿದೆ.

ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 2 ಸಾವಿರ ಮತಗಟ್ಟೆಗಳನ್ನು ಸ್ಥಾಪಿಸಲಾಗಿದ್ದು, ಅಂತಿಮ ಮತದಾರರ ಪಟ್ಟಿಯ ಪ್ರಕಾರ ಒಟ್ಟು 8 ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ 8,69,389 ಪುರು ’ರು, 8,88,113 ಮಹಿಳೆಯರು, 114 ಇತರೆ ಮತದಾರರು ಸೇರಿದಂತೆ ಒಟ್ಟು 17,57,616 ಮತದಾರರಿದ್ದಾರೆ.

*******

ಚಿಕ್ಕಮಗಳೂರು ಜಿಲ್ಲೆಯಲ್ಲಿ ಅನಧಿಕೃತವಾಗಿ ಹೋಂ ಸ್ಟೇ ರೆಸಾರ್ಟ್‌ಗಳನ್ನು ನಡೆಸುತ್ತಿದ್ದರೆ ಅಂತಹವರ ವಿರುಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಜಿಲ್ಲಾಧಿಕಾರಿ ಮೀನಾ ನಾಗರಾಜ್ ಎಚ್ಚರಿಕೆ ನೀಡಿದ್ದಾರೆ.

ಜಿಲ್ಲೆಯ ಅತಿಗುಂಡಿ, ಮುಳ್ಳಯ್ಯನಗಿರಿ ಪ್ರವಾಸಿ ತಾಣಗಳೀಗೆ ನಿನ್ನೆ ಭೇಟಿ ನೀಡಿ ಪರಿಶಿಲನೆ ನಡೆಸಿದ ಬಳಿಕ ಮಾತನಾಡಿದ ಅವರು, ನಿಯಮ ಮೀರಿ ಹೊಂ ಸ್ಟೆ ರೆಸಾರ್ಟ್‌ಗಳನ್ನು ನಡೆಸುತ್ತಿದ್ದರೆ ಅಂತಹವರ ವಿರುಧ ಕಠಿಣ ಕ್ರಮಕ್ಕೆ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಈ ರೀತಿ ಅನಧಿಕೃತವಾಗಿ ನಡೆಸುತ್ತಿದ್ದ 2 ರೆಸಾರ್ಟ್‌ಗಳನ್ನು ಬಂದ್ ಮಾಡಿಸಲಾಗಿದೆ. ಅಲ್ಲದೆ ನಿಯಮ ಉಲ್ಲಂಘನೆ ಮಾಡಿ ಹಾಕಲಾಗಿದ್ದ ಹೋಂ ಸ್ಟೇ ಹಾಗೂ ಇತರೆ ನಾಮಫಲಕಗಳನ್ನು ತೆರವು ಮಾಡಿಸಲಾಗಿದೆ ಎಂದು ತಿಳಿಸಿದರು.

*******

ವಿಜಯನಗರ ಜಿಲ್ಲೆಯ ಜೀವನಾಡಿ ತುಂಗಭದ್ರಾ ಜಲಾಶಯದಲ್ಲಿ ನೀರಿನ ಸಂಗ್ರಹ ಕಡಿಮೆಯಾಗಿದ್ದರೂ ಖಾಸಗಿ ಕಾರ್ಖಾನೆಗಳಿಗೆ ನೀರು ಹರಿಸುತ್ತಿರುವುದರ ವಿರುದ್ಧ ಹೋರಾಟ ಮಾಡಲಾಗುವುದು ಎಂದು ಕರ್ನಾಟಕ ರಾಜ್ಯ ರೈತ ಸಂಘದ ಗುಲ್ಬರ್ಗ ವಿಭಾಗದ ರಾಜ್ಯ ಕಾರ್ಯದರ್ಶಿ ಗೋಣಿಬಸಪ್ಪ ಹೇಳಿದ್ದಾರೆ.

ಹೊಸಪೇಟೆಯಲ್ಲಿ ನಿನ್ನೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಕುರಿತು 22 ಅಂದರೆ ನಾಳೆ ಜಿಲ್ಲಾಧಿಕಾರಿಗಳಿಗೆ ಪೈಪ್‌ಲೈನ್ ಕಡಿತಗೊಳಿಸುವ ಎಚ್ಚರಿಕೆಯೊಂದಿಗೆ ನೀರು ಬಿಡದಂತೆ ಒತ್ತಾಯದ ಮನವಿ ಪತ್ರ ನೀಡಲಾಗುವುದು ಎಂದರು.

*******

ಈಗ ಸಂಕ್ಷಿಪ್ತ ಸುದ್ದಿಗಳು

ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ಸಂಬಂಧಿಸಿದಂತೆ ಸಾರ್ವಜನಿಕ ಅಹವಾಲು ಅಥವಾ ದೂರುಗಳನ್ನು ಸಲ್ಲಿಸಲು, ಗದಗ ಜಿಲ್ಲೆಯಲ್ಲಿ ಕಂಟ್ರೋಲ್ ರೂಂ ಗಳನ್ನು ಸ್ಥಾಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್., ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಲೋಕಸಭಾ ಚುನಾವಣೆ ಹಿನ್ನೆಲೆ, ಜಿಲ್ಲಾ ಚುನಾವಣಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ಕಲಬುರಗಿ ನಗರದಲ್ಲಿನ ಗುಲಬರ್ಗಾ ಉತ್ತರ ಮತ್ತು ಗುಲಬರ್ಗಾ ದಕ್ಷಿಣ ಮತಕ್ಷೇತ್ರದ ವ್ಯಾಪ್ತಿಯ ವಿವಿಧ ಮತಗಟ್ಟೆಗಳಿಗೆ ಭೇಟಿ ನೀಡಿ ಮತಗಟ್ಟೆಯಲ್ಲಿನ ಮೂಲಸೌಕರ್ಯ ಕುರಿತು ಅಧಿಕಾರಿಗಳೊಂದಿಗೆ ಪರಿಶೀಲನೆ ನಡೆಸಿದರು.

*******

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು**

ಮೊದಲ ಹಂತದ ಸಾರ್ವತ್ರಿಕ ಲೋಕಸಭಾ ಚುನಾವಣೆ ಅಧಿಸೂಚನೆ ಪ್ರಕಟ: 102 ಲೋಕಸಭಾ ಕ್ಷೇತ್ರಗಳಿಗೆ ಮತದಾನ.

ಬೇಸಿಗೆ ಸಂದರ್ಭದಲ್ಲಿ ನೀರಿನ ದುಂದು ಬಳಕೆ ಬೇಡ–ಮುಖ್ಯಮಂತ್ರಿ ಸಿದ್ದರಾಮಯ್ಯ ಮನವಿ.

ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ವಿಚಾರದಲ್ಲಿ ಯಾವುದೇ ಗೊಂದಲವಿಲ್ಲ– ಬಿ.ಎಸ್.ಯಡಿಯೂರಪ್ಪ

ಲೋಕಸಭೆ ಚುನಾವಣೆ ಕರ್ತವ್ಯಕ್ಕೆ ನಿಯೋಜನೆಗೊಂಡಿರುವ ಉದ್ಯೋಗಿಗಳಿಗೆ ಅಂಚೆ ಮತದಾನದ ಸೌಲಭ್ಯ: ಚುನಾವಣಾ ಆಯೋಗ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು
ನಮ್ಮ ಮುಂದಿನ ರಾಷ್ಟ್ರೀಯ ವಾರ್ತೆ 7 ಗಂಟೆ 35 ನಿಮಿಷಕ್ಕೆ

******